# ಸುವರ್ಣ ವಿಧಾನಸೌಧ ನಿರ್ವಹಣೆಗೆ ಶಾಶ್ವತ ಯೋಜನೆ

**ಬೆಳಗಾವಿ:** ವರ್ಷವಿಡೀ ಸುವರ್ಣ ವಿಧಾನಸೌಧದ ಉತ್ತಮ ನಿರ್ವಹಣೆಗೆ ಸಂಬಂಧಿಸಿದಂತೆ ಶಾಶ್ವತ ಯೋಜನೆ ರೂಪಿಸಲಾಗುವುದು. ಈ ಸಂಬಂಧ ಸರ್ಕಾರ ಮತ್ತು ಸಂಬಂಧಪಟ್ಟ ಇಲಾಖೆಯ ಸಚಿವರ ಜತೆ ಚರ್ಚಿಸಲಾಗುವುದು ಎಂದು ವಿಧಾನಸಭೆ ಸಭಾಧ್ಯಕ್ಷ ಯು.ಟಿ.ಖಾದರ್ ಹಾಗೂ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್‌ನಲ್ಲಿ ಚಳಿಗಾಲ ಅಧಿವೇಶನ ನಡೆಯುವ ಹಿನ್ನೆಲೆಯಲ್ಲಿ ಮಂಗಳವಾರ ಪೂರ್ವಸಿದ್ಧತೆ ಪರಿಶೀಲಿಸಿದ ಅವರು ಸುವರ್ಣ ವಿಧಾನ ಸೌಧವನ್ನು ಬೆಂಗಳೂರಿನ ವಿಧಾನಸೌಧದ ಮಾದರಿಯಲ್ಲಿ ಸಮರ್ಪಕವಾಗಿ ನಿರ್ವಹಿಸಬೇಕೆಂದು ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಬೆಳಗ್ಗೆ ಸುವರ್ಣ ವಿಧಾನಸೌಧ ಕಟ್ಟಡವನ್ನು ವೀಕ್ಷಿಸಿದ ಸಭಾಧ್ಯಕ್ಷ ಯು.ಟಿ.ಖಾದರ್, ಪಶ್ಚಿಮ ಪ್ರವೇಶ ದ್ವಾರದ ಕೆಲವು ಕಡೆಗಳಲ್ಲಿ ಬಣ್ಣ ಮಾಸಿರುವುದು ಹಾಗೂ ಕಲೆಗಳಿರುವುದನ್ನು ನೋಡಿ ಲೋಕೋಪಯೋಗಿ ಇಲಾಖೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಸರ್ಕಾರ ಇದರ ನಿರ್ವಹಣೆಗೆ ಸಾಕಷ್ಟು ಹಣ ವೆಚ್ಚ ಮಾಡುತ್ತಿದೆ. ಹೀಗಿರುವಾಗ ಇದರ ನಿರ್ವಹಣೆ ಸರಿಯಾಗಿಲ್ಲ, ಮುಖ್ಯವಾಗಿ ಸೌಧದ ಮುಖ್ಯ ದ್ವಾರದಲ್ಲೇ ಕಟ್ಟಡ ಸ್ವಚ್ಛವಾಗಿಲ್ಲ, ಕೂಡಲೇ ಇದನ್ನು ಸರಿಪಡಿಸಲು ಸೂಚಿಸಿದರು.

ಧ್ವನಿವರ್ಧಕ, ಸ್ವಚ್ಛತೆ, ಆಸನ ವ್ಯವಸ್ಥೆ ವಿದ್ಯುತ್, ಅಂತರ್ಜಾಲ ಸಂಪರ್ಕ, ಕಂಪ್ಯೂಟರ್ ಸೇರಿದಂತೆ ಅಧಿವೇಶನ ಸಂದರ್ಭದಲ್ಲಿ ಅಗತ್ಯ ಮೂಲಸೌಕರ್ಯ ಒದಗಿಸಬೇಕು. ವಿಧಾನಸಭೆ ಸಭಾಂಗಣದಲ್ಲಿ ದೊಡ್ಡ ಪರದೆಯ ಟಿವಿ ಅಳವಡಿಸಬೇಕು. ಸಭಾಧ್ಯಕ್ಷರ ಕುರ್ಚಿ ಎದುರು ಎಲ್ಲ ಶಾಸಕರ ಹೆಸರು ಹಾಗೂ ಆಸನ ಸಂಖ್ಯೆಯ ಮಾಹಿತಿಯನ್ನು ಪ್ರದರ್ಶಿಸುವ ಚಾರ್ಟ್ ಅಳವಡಿಸಬೇಕು ಎಂದು ಸೂಚಿಸಿದರು. ನಂತರ ಸೆಂಟ್ರಲ್ ಹಾಲ್, ಪರಿಷತ್ ಸಭಾಂಗಣ, ಸಭಾಪತಿ ಕೊಠಡಿ, ವಿಪಕ್ಷದ ಮೊಗಸಾಲೆ, ಮಂತ್ರಿಗಳ ಮೊಗಸಾಲೆ, ಕ್ಯಾಬಿನೆಟ್ ಹಾಲ್, ಆಡಿಟೋರಿಯಂ ಮತ್ತಿತರ ಸ್ಥಳಗಳನ್ನು ಪರಿಶೀಲಿಸಿದರು.

ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಪೊಲೀಸ್ ಆಯುಕ್ತರಾದ ಎಸ್.ಎನ್.ಸಿದ್ದರಾಮಪ್ಪ, ಜಿಪಂ ಸಿಇಒ ಹರ್ಷಲ್ ಭೋಯರ್, ವಿಧಾನ ಪರಿಷತ್ ಕಾರ್ಯದರ್ಶಿ ಮಹಾಲಕ್ಷ್ಮೀ, ವಿಧಾನಸಭೆ ಕಾರ್ಯದರ್ಶಿ ವಿಶಾಲಾಕ್ಷಿ ಇದ್ದರು. ಲೋಕೋಪಯೋಗಿ ಇಲಾಖೆ ಕಾರ್ಯನಿರ್ವಾಹಕ ಎಂಜಿನಿಯರ್ ಸೊಬರದ ಅವರು ಸುವರ್ಣ ವಿಧಾನಸೌಧದ ನಿರ್ವಹಣೆ ಕುರಿತು ವಿವರಿಸಿದರು.



**ಬೆಳಗಾವಿ: ಚಳಿಗಾಲದ ಅಧಿವೇಶನದ ಹಿನ್ನೆಲೆಯಲ್ಲಿ ಮಂಗಳವಾರ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸುವರ್ಣ ವಿಧಾನಸೌಧಕ್ಕೆ ಭೇಟಿ ನೀಡಿ ಸಿದ್ಧತೆ ಪರಿಶೀಲಿಸಿದರು.**

## ಬೆಳಗಾವಿಯಲ್ಲಿ ಅಧಿವೇಶನದಿಂದ ಕುಗ್ಗಿದ ಎಂಇಎಸ್ ಬಲ

**ಬೆಳಗಾವಿ:** ಗಡಿ ಜಿಲ್ಲೆ ಬೆಳಗಾವಿಯಲ್ಲಿ ಸುವರ್ಣ ವಿಧಾನಸೌಧ ನಿರ್ಮಾಣದಿಂದ ಬೆಳಗಾವಿಯನ್ನು ಮಹಾರಾಷ್ಟ್ರಕ್ಕೆ ಸೇರಿಸಬೇಕು ಎಂಬ ಕೂಗು ಬಹಳ ಕ್ಷೀಣವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು. ಸುವರ್ಣ ವಿಧಾನಸೌಧದಲ್ಲಿ ಮಂಗಳವಾರ ಚಳಿಗಾಲದ ಅಧಿವೇಶನ ಪೂರ್ವಸಿದ್ಧತೆ ಪರಿಶೀಲನೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುವರ್ಣ ವಿಧಾನಸೌಧ ನಿರ್ಮಾಣದಿಂದ ಕನ್ನಡಕ್ಕೆ ಸ್ಫೂರ್ತಿ ಬಂದಂತಾಗಿದೆ. ಅನೇಕ ಸರ್ಕಾರಿ ಕಚೇರಿಗಳು ಕೂಡ ಸ್ಥಳಾಂತರಗೊಂಡಿವೆ. ಮಹಾರಾಷ್ಟ್ರ ಏಕೀಕರಣ ಸಮಿತಿ ಬಲ ಸಂಪೂರ್ಣ ಕುಗ್ಗಿದ್ದು ಇದರಿಂದ ಬೆಳಗಾವಿ ಮಹಾರಾಷ್ಟ್ರಕ್ಕೆ ಸೇರಿಸಬೇಕು ಎಂಬ ಕೂಗು ಇಲ್ಲದಂತಾಗಿದೆ. ಗಡಿ ವಿವಾದ ಕೂಗು ತುಗ್ಗಿಸುವ ಉದ್ದೇಶದಿಂದಲೇ ಇಲ್ಲಿ ಅಧಿವೇಶನ ನಡೆಸಲು ನಿರ್ಧರಿಸಲಾಗಿತ್ತು. ಅದರಂತೆ ಕುಮಾರಸ್ವಾಮಿ ಸರ್ಕಾರ ಇದ್ದಾಗ 2005ರಲ್ಲಿ ಇಲ್ಲಿ ಮೊದಲ ಅಧಿವೇಶನ ನಡೆಸಲಾಯಿತು. ಆಗಿನಿಂದ ನಿಧಾನವಾಗಿ ಗಡಿ ಜಿಲ್ಲೆಯಲ್ಲಿ ಎಂಇಎಸ್ ಬಲ ಕುಗ್ಗಿತು. ಬೆಳಗಾವಿಯನ್ನು ಮಹಾರಾಷ್ಟ್ರಕ್ಕೆ ಸೇರಿಸಬೇಕು ಎಂಬ ಧ್ವನಿ ಕ್ಷೀಣಿಸಿತು ಎಂದರು.

## ವಸತಿ, ಊಟೋಪಹಾರ ವ್ಯವಸ್ಥೆಗೆ ಸ್ಪೀಕರ್ ಸೂಚನೆ

**ಬೆಳಗಾವಿ:** ಪ್ರತಿವರ್ಷದಂತೆ ವಿಧಾನ ಮಂಡಲ ಚಳಿಗಾಲ ಅಧಿವೇಶನದಲ್ಲಿ ಭಾಗವಹಿಸುವ ಸಚಿವರು, ಶಾಸಕರು, ಅಧಿಕಾರಿಗಳು ಸೇರಿದಂತೆ ಎಲ್ಲರಿಗೂ ಸೂಕ್ತವಾದ ವಸತಿ, ಊಟೋಪಹಾರ ಹಾಗೂ ಸಾರಿಗೆ ಸೌಕರ್ಯ ಒದಗಿಸಬೇಕು. ಇದಲ್ಲದೇ ವಿಧಾನ ಮಂಡಲದ ಕಲಾಪಗಳನ್ನು ಸುಗಮವಾಗಿ ನಡೆಸಲು ಅಗತ್ಯವಿರುವ ಮೂಲಸೌಲಭ್ಯ ಸಮರ್ಪಕವಾಗಿ ಒದಗಿಸಬೇಕು ಎಂದು ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ವಿಧಾನ ಮಂಡಲ ಚಳಿಗಾಲ ಅಧಿವೇಶನದ ಹಿನ್ನೆಲೆಯಲ್ಲಿ ಮಂಗಳವಾರ ಸುವರ್ಣ ವಿಧಾನಸೌಧದ ಸಭಾಂಗಣದಲ್ಲಿ ಅಧಿಕಾರಿಗಳ ಮತ್ತು ವಿವಿಧ ಸಮಿತಿಗಳ ಮುಖ್ಯಸ್ಥರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಧಿವೇಶನ ಸಂದರ್ಭದಲ್ಲಿ ಯಾವುದೇ ರೀತಿಯ ಅವ್ಯವಸ್ಥೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಏನೇ ಸಮಸ್ಯೆಗಳಿದ್ದರೆ ಅಥವಾ ಹೆಚ್ಚಿನ ಅನುಕೂಲತೆ ಬೇಕಾದರೆ ತಮ್ಮ ಅಥವಾ ಹಿರಿಯ ಅಧಿಕಾರಿಗಳ ಗಮನಕ್ಕೆ ತರಬೇಕು. ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಿತಿಗಳು ತಮಗೆ ವಹಿಸಿರುವ ಜವಾಬ್ದಾರಿಗಳನ್ನು ನಿಭಾಯಿಸಬೇಕು ಎಂದರು.